# All India Radio: Bangalore
## National Bulletin In Kannada
## 08.03.2026  7.35 am

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

<>><><*><><<>

ಮುಖ್ಯಾಂಶಗಳು

೧. ಇಂದು ಅಂತಾರಾಷ್ಟ್ರೀಯ ಮಹಿಳಾ ದಿನ; ನವದೆಹಲಿಯಲ್ಲಿ ನಡೆಯುವ ಪ್ರಧಾನ ಕಾರ್ಯಕ್ರಮದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಭಾಗಿ

೨. ನವದೆಹಲಿಯಲ್ಲಿ ೩೩ ಸಾವಿರದ ೫೦೦ ಕೋಟಿ ರೂಪಾಯಿ ವೆಚ್ಚದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಇಂದು ಪ್ರಧಾನಿ ನರೇಂದ್ರ ಮೋದಿ ಚಾಲನೆ

೩. ಆಲ್ ಇಂಗ್ಲೆಂಡ್ ಓಪನ್ ಬ್ಯಾಡ್ಮಿಂಟನ್ ಚಾಂಪಿಯನ್‌ಶಿಪ್; ಭಾರತದ ಲಕ್ಷ್ಯ ಸೇನ್ ಫೈನಲ್ ಪ್ರವೇಶ

೪. ಐಸಿಸಿ ಟಿ-೨೦ ವಿಶ್ವಕಪ್ ಕ್ರಿಕೆಟ್ ಫೈನಲ್; ಪ್ರಶಸ್ತಿಗಾಗಿ ಇಂದು ಭಾರತ - ನ್ಯೂಜಿಲೆಂಡ್ ಸೆಣಸು

<>><><*><><<>

ಇಂದು ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ. "ಹಕ್ಕುಗಳು. ನ್ಯಾಯ. ಕ್ರಿಯೆ. ಎಲ್ಲಾ ಮಹಿಳೆಯರು ಮತ್ತು ಬಾಲಕಿಯರಿಗಾಗಿ." ಎಂಬುದು ಈ ವರ್ಷದ ಧ್ಯೇಯವಾಕ್ಯವಾಗಿದ್ದು, ಮಹಿಳೆಯರ ಹಕ್ಕುಗಳನ್ನು ಬಲಪಡಿಸುವ, ನ್ಯಾಯದ ಪ್ರವೇಶವನ್ನು ಖಚಿತಪಡಿಸಿಕೊಳ್ಳುವ ಮತ್ತು ವಿಶ್ವಾದ್ಯಂತ ಲಿಂಗ ಸಮಾನತೆಯ ಕಡೆಗೆ ಕ್ರಮವನ್ನು ವೇಗಗೊಳಿಸುವ ಅಗತ್ಯತೆಯನ್ನು ಪ್ರತಿಬಿಂಬಿಸುತ್ತದೆ. ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ದೇಶಾದ್ಯಂತ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ. ನವದೆಹಲಿಯ ಮಾಣೆಕ್ಷಾ ಕೇಂದ್ರದಲ್ಲಿ ನಡೆಯುವ ಪ್ರಧಾನ ಕಾರ್ಯಕ್ರಮದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಭಾಗವಹಿಸಲಿದ್ದಾರೆ. ಕೇಂದ್ರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಅನ್ನಪೂರ್ಣ ದೇವಿ ಮತ್ತು ರಾಜ್ಯ ಸಚಿವೆ ಸಾವಿತ್ರಿ ಠಾಕೂರ್ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವಾಲಯ, "ಕರ್ತವ್ಯ ಹಾದಿಯಲ್ಲಿ ಶಕ್ತಿ ನಡಿಗೆ" ಎಂಬ ಮಹಿಳಾ ನೇತೃತ್ವದ ನಡಿಗೆಯನ್ನು ಸಹ ಆಯೋಜಿಸುತ್ತಿದೆ. ವೈವಿಧ್ಯಮಯ ಕ್ಷೇತ್ರಗಳ ಮಹಿಳೆಯರು ಒಟ್ಟಾಗಿ ನಡೆಯುತ್ತಾರೆ. ಪ್ರಗತಿಪರ ಮತ್ತು ಅಂತರ್ಗತ ಭಾರತವನ್ನು ರೂಪಿಸುವಲ್ಲಿ ಮಹಿಳೆಯರು ವಹಿಸುವ ಪಾತ್ರದ ಮಹತ್ವವನ್ನು ಸಾರುತ್ತದೆ. ರಾಷ್ಟ್ರೀಯ, ಜನಾಂಗೀಯ, ಭಾಷಾ, ಸಾಂಸ್ಕೃತಿಕ, ಆರ್ಥಿಕ ಅಥವಾ ರಾಜಕೀಯ ಗಡಿಗಳಲ್ಲಿ ಮಹಿಳೆಯರ ಸಾಧನೆಗಳನ್ನು ಗುರುತಿಸಲು ಅಂತಾರಾಷ್ಟ್ರೀಯ ಮಹಿಳಾ ದಿನವನ್ನು ಆಚರಿಸಲಾಗುತ್ತದೆ. ಈ ದಿನವು ಎಲ್ಲರಿಗೂ ಸಮಾನ ಹಕ್ಕುಗಳು ಮತ್ತು ಅವಕಾಶಗಳನ್ನು ಕೋರುತ್ತದೆ. ೧೯೭೭ ರಲ್ಲಿ ವಿಶ್ವಸಂಸ್ಥೆಯಿಂದ ಗುರುತಿಸಲ್ಪಟ್ಟ ಈ ದಿನವು ಲಿಂಗ ಸಮಾನತೆಯ ಪ್ರಗತಿಗೆ ಒತ್ತಾಯಿಸುವ ಜಾಗತಿಕ ಕ್ಷಣವಾಗಿದೆ.

<>><><*><><<>

ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆಯ ದಿನದ ಅಂಗವಾಗಿ ರಾಷ್ಟ್ರಪತಿ ದ್ರೌಪದಿಮುರ್ಮು, ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್, ಪ್ರಧಾನಿ ನರೇಂದ್ರ ಮೋದಿ, ಕರ್ನಾಟಕದ ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಹಲವು ಗಣ್ಯರು ಶುಭಾಶಯ ಕೋರಿದ್ದಾರೆ. ರಾಷ್ಟ್ರಪತಿ ದ್ರೌಪದಿ ಮುರ್ಮು ದೇಶದ ಎಲ್ಲಾ ನಾಗರಿಕರಿಗೆ, ವಿಶೇಷವಾಗಿ ಮಹಿಳೆಯರಿಗೆ ಶುಭಾಶಯ ಕೋರಿದ್ದಾರೆ. ಮಹಿಳೆಯರು ಸಮಾಜ ಮತ್ತು ರಾಷ್ಟ್ರದ ಅಡಿಪಾಯವಾಗಿದ್ದು, ವಿದ್ಯಾವಂತ, ಸ್ವಾವಲಂಬಿ ಮತ್ತು ಸಶಕ್ತ ಮಹಿಳೆಯರು, ಸಮೃದ್ಧ ಮತ್ತು ಪ್ರಗತಿಪರ ರಾಷ್ಟ್ರಕ್ಕೆ ಕೊಡುಗೆ ನೀಡಬಲ್ಲರು ಎಂದು ರಾಷ್ಟ್ರಪತಿಗಳು ತಮ್ಮ ಸಂದೇಶದಲ್ಲಿ ತಿಳಿಸಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ, ಸಮಸ್ತ ಮಹಿಳಾ ಸಮೂಹಕ್ಕೆ ಶುಭಾಶಯ ಕೋರಿದ್ದಾರೆ. ವಿವಿಧ ಕಲ್ಯಾಣ ಉಪಕ್ರಮಗಳ ಮೂಲಕ ಮಹಿಳಾ ಸಬಲೀಕರಣವನ್ನು ಬಲಪಡಿಸುವ ಸರ್ಕಾರದ ಬದ್ಧತೆಯನ್ನು ಪುನರುಚ್ಚರಿಸಿದ್ದಾರೆ. ಸಾಮಾಜಿಕ, ಆರ್ಥಿಕ, ಶೈಕ್ಷಣಿಕ, ಸಾಂಸ್ಕೃತಿಕ ಮತ್ತು ರಾಜಕೀಯ ಕ್ಷೇತ್ರಗಳಲ್ಲಿ ಮಹಿಳಾ ಸಬಲೀಕರಣ, ಸಮಾನತೆ ಮತ್ತು ಘನತೆಯ ಬಗ್ಗೆ ಜಾಗೃತಿ ಮೂಡಿಸುವುದು ಅಂತಾರಾಷ್ಟ್ರೀಯ ಮಹಿಳಾ ದಿನದ ಉದ್ದೇಶವಾಗಿದೆ ಎಂದು ತಿಳಿಸಿದ್ದಾರೆ.

<>><><*><><<>

ರಾಷ್ಟ್ರ ರಾಜಧಾನಿ ದೆಹಲಿ ಮೂಲಸೌಕರ್ಯಕ್ಕೆ ಮತ್ತಷ್ಟು ವೇಗ ನೀಡುವ ನಿಟ್ಟಿನಲ್ಲಿ ಪ್ರಧಾನಿ ನರೇಂದ್ರ ಮೋದಿ, ಇಂದು ನವದೆಹಲಿಯಲ್ಲಿ ಸುಮಾರು ೩೩ ಸಾವಿರದ ೫೦೦ ಕೋಟಿ ರೂಪಾಯಿ ಮೊತ್ತದ ವಿವಿಧ ಅಭಿವೃದ್ಧಿ ಯೋಜನೆಗಳ ಉದ್ಘಾಟನೆ ಮತ್ತು ಶಂಕುಸ್ಥಾಪನೆಯನ್ನು ನೆರವೇರಿಸಲಿದ್ದಾರೆ. ಈ ಕಾರ್ಯಕ್ರಮದಲ್ಲಿ ಪ್ರಮುಖವಾಗಿ ದೆಹಲಿ ಮೆಟ್ರೋ ಜಾಲದ ವಿಸ್ತರಣೆಗೆ ಹೆಚ್ಚಿನ ಒತ್ತು ನೀಡಲಾಗಿದ್ದು, ಸುಮಾರು ೧೮ ಸಾವಿರದ ೩೦೦ ಕೋಟಿ ರೂಪಾಯಿ ವೆಚ್ಚದ ಮೆಟ್ರೋ ಯೋಜನೆಗಳಿಗೆ ಪ್ರಧಾನಿ ಚಾಲನೆ ನೀಡಲಿದ್ದಾರೆ.  ಈ ವೇಳೆ ಅವರು, ದೆಹಲಿ ಮೆಟ್ರೋದ ಎರಡು ಪ್ರಮುಖ ನೂತನ ಕಾರಿಡಾರ್‌ಗಳನ್ನು ಉದ್ಘಾಟಿಸಲಿದ್ದಾರೆ. ಈ ವಿಸ್ತರಿತ ಮೆಟ್ರೋ ಸಂಪರ್ಕದಿಂದಾಗಿ ಬುರಾರಿ, ಜಗತ್‌ಪುರ-ವಜೀರಾಬಾದ್, ಖಜುರಿ ಖಾಸ್, ಭಜನ್‌ಪುರ, ಯಮುನಾ ವಿಹಾರ್, ಮಧುಬನ್ ಚೌಕ್, ಹೈದರ್‌ಪುರ ಬದ್ಲಿ ಮೋರ್, ಭಲಸ್ವಾ ಮತ್ತು ಮಜ್ಲಿಸ್ ಪಾರ್ಕ್ ಸೇರಿದಂತೆ ದೆಹಲಿಯ ಅನೇಕ ಪ್ರದೇಶಗಳ ಸಾರ್ವಜನಿಕರಿಗೆ ಹೆಚ್ಚಿನ ಅನುಕೂಲವಾಗಲಿದೆ.

<>><><*><><<>

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರ ಭೇಟಿಯ ಸಂದರ್ಭದಲ್ಲಿ ಶಿಷ್ಟಾಚಾರವನ್ನು ಪಾಲಿಸದ ಮತ್ತು ಪಶ್ಚಿಮ ಬಂಗಾಳದಲ್ಲಿ ನಡೆದ ಅಂತಾರಾಷ್ಟ್ರೀಯ ಸಂತಲ್ ಸಮ್ಮೇಳನದ ಸ್ಥಳವನ್ನು ಹಠಾತ್ತನೆ ಬದಲಾಯಿಸಿದ್ದಕ್ಕಾಗಿ ಪ್ರಧಾನಿ ನರೇಂದ್ರ ಮೋದಿ ಅವರು ಟಿಎಂಸಿ ಸರ್ಕಾರವನ್ನು ಟೀಕಿಸಿದ್ದಾರೆ. ಈ ಕುರಿತು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಪ್ರಧಾನಿ, ಟಿಎಂಸಿ ಸರ್ಕಾರವು ಎಲ್ಲಾ ಮಿತಿಗಳನ್ನು ಮೀರಿದೆ ಮತ್ತು ರಾಷ್ಟ್ರಪತಿಗೆ ಆದ ಈ ಅವಮಾನಕ್ಕೆ ಟಿಎಂಸಿಯ ಆಡಳಿತವೇ ಕಾರಣವಾಗಿದೆ. ರಾಷ್ಟ್ರಪತಿಗಳ ಕಚೇರಿ ರಾಜಕೀಯವನ್ನು ಮೀರಿದ್ದು, ಈ ಕಚೇರಿಯ ಪಾವಿತ್ರ್ಯವನ್ನು ಗೌರವಿಸಬೇಕು ಎಂದು ತಿಳಿಸಿದ್ದಾರೆ. ಬುಡಕಟ್ಟು ಸಮುದಾಯದಿಂದ ಬಂದಿರುವ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು, ವ್ಯಕ್ತಪಡಿಸಿದ ನೋವು ಮತ್ತು ಯಾತನೆ ದೇಶದ ಜನರ ಮನಸ್ಸಿನಲ್ಲಿ ಅಪಾರ ದುಃಖ ಉಂಟುಮಾಡಿದೆ ಎಂದು ಹೇಳಿದ್ದಾರೆ. ಈ ಘಟನೆಯಿಂದ ಪ್ರಜಾಪ್ರಭುತ್ವ ಮತ್ತು ಬುಡಕಟ್ಟು ಸಮುದಾಯಗಳ ಸಬಲೀಕರಣದಲ್ಲಿ ನಂಬಿಕೆ ಇಡುವ ಪ್ರತಿಯೊಬ್ಬರೂ ನಿರಾಶೆಗೊಂಡಿದ್ದಾರೆ. ಸಂತಾಲ್ ಸಂಸ್ಕೃತಿಯಂತಹ ಮುಖ್ಯವಾದ ವಿಷಯವನ್ನು ಪಶ್ಚಿಮ ಬಂಗಾಳ ಸರ್ಕಾರವು ಇಷ್ಟು

ಅಸಡ್ಡೆಯಿಂದ ನಡೆಸಿಕೊಂಡಿರುವುದು ಅಷ್ಟೇ ದುರದೃಷ್ಟಕರ ಎಂದು ಪ್ರಧಾನಿ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

<><><*><><<>

ಪಶ್ಚಿಮ ಏಷ್ಯಾದಲ್ಲಿ ಸಂಘರ್ಷ ಆರಂಭವಾದ ನಂತರ ಮಾರ್ಚ್ ೧ ರಿಂದ ಮಾರ್ಚ್ ೭ ರವರೆಗೆ ೫೨ ಸಾವಿರಕ್ಕೂ ಹೆಚ್ಚು ಭಾರತೀಯ ಪ್ರಜೆಗಳನ್ನು ಕೊಲ್ಲಿ ರಾಷ್ಟ್ರಗಳಿಂದ ಭಾರತಕ್ಕೆ ಸುರಕ್ಷಿತವಾಗಿ ಕರೆತರಲಾಗಿದೆ ಎಂದು ವಿದೇಶಾಂಗ ಸಚಿವಾಲಯ-ಎಮ್‌ಇಎ ತಿಳಿಸಿದೆ. ಈ ಪೈಕಿ ೩೨ ಸಾವಿರದ ೧೦೭ ಪ್ರಯಾಣಿಕರು ಭಾರತೀಯ ವಿಮಾನಯಾನ ಸಂಸ್ಥೆಗಳಲ್ಲಿ ಪ್ರಯಾಣಿಸಿದ್ದರೆ, ಉಳಿದವರು ವಿದೇಶಿ ವಿಮಾನಯಾನ ಸಂಸ್ಥೆಗಳಿಂದ ಪ್ರಯಾಣಿಸಲ್ಪಟ್ಟಿದ್ದಾರೆ ಎಂದು ಎಮ್‌ಇಎ ತಿಳಿಸಿದೆ. ಭಾರತ ಸರ್ಕಾರ, ಪಶ್ಚಿಮ ಏಷ್ಯಾ ಮತ್ತು ಕೊಲ್ಲಿ ರಾಷ್ಟ್ರಗಳಲ್ಲಿ ಬೆಳವಣಿಗೆಗಳನ್ನು ನಿರಂತರವಾಗಿ ಮೇಲ್ವಿಚಾರಣೆ ಮಾಡುತ್ತಿದೆ, ಭಾರತೀಯ ಪ್ರಜೆಗಳ ಸುರಕ್ಷತೆಗಾಗಿ ಒತ್ತು ನೀಡಿದೆ ಎಂದು ಎಮ್‌ಇಎ ಪ್ರಧಾನ ಕಾರ್ಯದರ್ಶಿ ವಕ್ತಾರ ರಣಧೀರ್ ಜೈಸ್ವಾಲ್ ತಿಳಿಸಿದ್ದಾರೆ.

<><><*><><<>

ಪಶ್ಚಿಮ ಏಷ್ಯಾದ ಬಿಕ್ಕಟ್ಟಿನ ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು, ಪಶ್ಚಿಮ ಏಷ್ಯಾ ವಲಯದ ಕೇಂದ್ರೀಯ ಪ್ರೌಢ ಶಿಕ್ಷಣ ಮಂಡಳಿ - ಸಿಬಿಎಸ್‌ಇ, ಈ ಪ್ರದೇಶದಲ್ಲಿ ಮಾರ್ಚ್ ೯, ೧೦ ಮತ್ತು ೧೧ ರಂದು ನಿಗದಿಯಾಗಿದ್ದ ೧೨ ನೇ ತರಗತಿಯ ಪರೀಕ್ಷೆಗಳನ್ನು ಮುಂದೂಡಿದ್ದು, ಪರೀಕ್ಷೆಗಳ ಹೊಸ ದಿನಾಂಕಗಳನ್ನು ನಂತರ ಪ್ರಕಟಿಸಲಾಗುವುದು ಎಂದು ಮಂಡಳಿ ತಿಳಿಸಿದೆ. ಈ ತಿಂಗಳ ೧೦ ರಂದು ಪರಿಸ್ಥಿತಿಯನ್ನು ಪರಿಶೀಲಿಸಿ ಮಾರ್ಚ್ ೧೨ ರಿಂದ ನಿಗದಿಯಾಗಿರುವ ಪರೀಕ್ಷೆಗಳಿಗೆ ಸಂಬಂಧಿಸಿದಂತೆ ಸೂಕ್ತ ಕ್ರಮ ಕೈಗೊಳ್ಳುವುದಾಗಿ ಸಿಬಿಎಸ್‌ಇ ತಿಳಿಸಿದೆ.  ನವೀಕರಣಗಳಿಗಾಗಿ ವಿದ್ಯಾರ್ಥಿಗಳು ತಮ್ಮ ಶಾಲೆಗಳೊಂದಿಗೆ ಸಂಪರ್ಕದಲ್ಲಿರಲು ಮತ್ತು ಅಧಿಕೃತ ಪ್ರಕಟಣೆಗಳನ್ನು ಅನುಸರಿಸಲು ಮಂಡಳಿಯು ಸೂಚಿಸಿದೆ.

<><><*><><<>

ನೇಪಾಳ ಸಂಸತ್ ಚುನಾವಣೆಯಲ್ಲಿ ರ್‍ಯಾಪರ್ ಬಾಲೇಂದ್ರ ಶಾ ಅವರ ರಾಷ್ಟ್ರೀಯ ಸ್ವತಂತ್ರ ಪಕ್ಷ-ಆರ್‌ಎಸ್‌ಪಿ ಭರ್ಜರಿ ಗೆಲುವು ಸಾಧಿಸುವುದರೊಂದಿಗೆ ನೇಪಾಳದಲ್ಲಿ ಮುಂದಿನ ಸರ್ಕಾರ ರಚಿಸಲು ಸಜ್ಜಾಗಿದೆ.  ಬಾಲೆನ್ ಎಂದೇ ಜನಪ್ರಿಯರಾಗಿರುವ ಆರ್‌ಎಸ್‌ಪಿಯ ೩೫ ವರ್ಷದ ಪ್ರಧಾನಿ ಅಭ್ಯರ್ಥಿ ಬಾಲೇಂದ್ರ ಶಾ, ಝಾಪಾ-೫ ಕ್ಷೇತ್ರದಲ್ಲಿ ನಾಲ್ಕು ಬಾರಿ ಪ್ರಧಾನಿಯಾಗಿದ್ದ ಸಿಪಿಎನ್-ಯುಎಂಎಲ್‌ನ ಕೆಪಿ ಶರ್ಮಾ ಓಲಿ ಅವರನ್ನು ಸುಮಾರು ೫೦ ಸಾವಿರ ಮತಗಳ ಅಂತರದಿಂದ ಸೋಲಿಸಿದ್ದಾರೆ. ನಿನ್ನೆ ರಾತ್ರಿ ೯:೩೦ ರ ವೇಳೆಗೆ ಫಲಿತಾಂಶಗಳು ಪ್ರಕಟವಾದ ೯೭ ಸ್ಥಾನಗಳಲ್ಲಿ ಆರ್‌ಎಸ್‌ಪಿ ೭೭ ಸ್ಥಾನಗಳನ್ನು ಗೆದ್ದಿದೆ. ದೇಶಾದ್ಯಂತ ೪೮ ಸ್ಥಾನಗಳಲ್ಲಿ ಮುನ್ನಡೆ ಸಾಧಿಸಿದ್ದರೂ, ಕಠ್ಮಂಡು ಜಿಲ್ಲೆಯ ಎಲ್ಲಾ ೧೦ ಕ್ಷೇತ್ರಗಳಲ್ಲಿ ಆರ್‌ಎಸ್‌ಪಿಯ ಸ್ಥಾನಗಳು ಕ್ಲೀನ್ ಸ್ವೀಪ್ ಆಗಿವೆ. ಇದೇ ಮಾರ್ಚ್ ೫ ರಂದು ನಡೆದ ಚುನಾವಣೆಯಲ್ಲಿ ಸುಮಾರು ೬೦ ಪ್ರತಿಶತದಷ್ಟು ಮತದಾನ ನಡೆದಿತ್ತು. ಚುನಾವಣೆಗಳನ್ನು ಯಶಸ್ವಿಯಾಗಿ ನಡೆಸಿದ್ದಕ್ಕಾಗಿ ಪ್ರಧಾನಿ ನರೇಂದ್ರ ಮೋದಿ ನೇಪಾಳದ ಜನರು ಮತ್ತು ಸರ್ಕಾರವನ್ನು ಅಭಿನಂದಿಸಿದ್ದಾರೆ. ನನ್ನ ನೇಪಾಳಿ ಸಹೋದರಿಯರು ಮತ್ತು ಸಹೋದರರು ತಮ್ಮ ಪ್ರಜಾಪ್ರಭುತ್ವ ಹಕ್ಕುಗಳನ್ನು ಇಷ್ಟು ರೋಮಾಂಚಕವಾಗಿ ಚಲಾಯಿಸುವುದನ್ನು ನೋಡುವುದು ಹೃದಯಸ್ಪರ್ಶಿಯಾಗಿದೆ ಎಂದು ಪ್ರಧಾನಿ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಹೇಳಿದ್ದಾರೆ.

<>><><*><><<>

ಬರ್ಮಿಂಗ್‌ಹ್ಯಾಮ್‌ನಲ್ಲಿ ನಡೆಯುತ್ತಿರುವ ಆಲ್ ಇಂಗ್ಲೆಂಡ್ ಓಪನ್ ಬ್ಯಾಡ್ಮಿಂಟನ್ ಚಾಂಪಿಯನ್‌ಶಿಪ್‌ನಲ್ಲಿ ಲಕ್ಷ್ಯ ಸೇನ್ ಪುರುಷರ ಸಿಂಗಲ್ಸ್ ಫೈನಲ್‌ಗೆ ಪ್ರವೇಶಿಸಿದ್ದಾರೆ. ನಿನ್ನೆ ನಡೆದ ಸೆಮಿಫೈನಲ್ ಪಂದ್ಯದಲ್ಲಿ ವಿಶ್ವದ ೧೨ ನೇ ಶ್ರೇಯಾಂಕದ ಲಕ್ಷ್ಯಸೇನ್, ಕೆನಡಾದ ವಿಕ್ಟರ್ ಲೈ ಅವರನ್ನು ೨೧-೧೬, ೧೮-೨೧, ೨೧-೧೫ ಸೆಟ್‌ಗಳಿಂದ ಮಣಿಸಿದರು. ಇಂದು ಸಂಜೆ ೫ ಗಂಟೆಗೆ ನಡೆಯುವ ಫೈನಲ್ ಪಂದ್ಯದಲ್ಲಿ ಲಕ್ಷ್ಯಸೇನ್, ಚೈನೀಸ್ ತೈಪೆಯ ಲಿನ್ ಚುನ್-ಯಿ ಅವರನ್ನು ಎದುರಿಸಲಿದ್ದಾರೆ. ಈ ಪಂದ್ಯದಲ್ಲಿ ಲಕ್ಷ್ಯಸೇನ್ ಜಯಗಳಿಸಿದರೆ, ೨೫ ವರ್ಷಗಳ ಬಳಿಕ ಆಲ್ ಇಂಗ್ಲೆಂಡ್ ಓಪನ್ ಬ್ಯಾಡ್ಮಿಂಟನ್ ಚಾಂಪಿಯನ್‌ಶಿಪ್ ಪ್ರಶಸ್ತಿ ಮುಡಿಗೇರಿಸಿಕೊಂಡತಾಗುತ್ತದೆ. ಈವರೆಗೆ, ಇಬ್ಬರು ಭಾರತೀಯರು ಈ ಸಾಧನೆ ಮಾಡಿದ್ದಾರೆ. ೧೯೮೦ ರಲ್ಲಿ ಪ್ರಕಾಶ್ ಪಡುಕೋಣೆ ಮತ್ತು ೨೦೦೧ ರಲ್ಲಿ ಪುಲ್ಲೇಲ ಗೋಪಿಚಂದ್. ೨೦೨೨ ರಲ್ಲಿ ರನ್ನರ್ ಅಪ್ ಸ್ಥಾನ ಪಡೆದ ನಂತರ ಲಕ್ಷ್ಯ ಅವರ ಎರಡನೇ ಆಲ್ ಇಂಗ್ಲೆಂಡ್ ಫೈನಲ್ ಇದಾಗಿದೆ.

<>><><*><><<>

ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ಇಂದು ನಡೆಯಲಿರುವ ಐಸಿಸಿ ಪುರುಷರ ಟಿ-೨೦ ವಿಶ್ವಕಪ್ ಕ್ರಿಕೆಟ್‌ನ ಫೈನಲ್ ಪಂದ್ಯದಲ್ಲಿ ಪ್ರಶಸ್ತಿಗಾಗಿ ಭಾರತ ಹಾಗೂ ನ್ಯೂಜಿಲೆಂಡ್ ತಂಡಗಳು ಸೆಣಸಲಿವೆ. ಪಂದ್ಯ ಸಂಜೆ ೭ ಗಂಟೆಗೆ ಆರಂಭವಾಗಲಿದೆ. ಸೂರ್ಯಕುಮಾರ್ ಯಾದವ್ ನೇತೃತ್ವದ ಹಾಲಿ ಚಾಂಪಿಯನ್ ಭಾರತ ತಂಡ, ಸೆಮಿಫೈನಲ್‌ನಲ್ಲಿ ಇಂಗ್ಲೆಂಡ್ ವಿರುದ್ಧ ೭ ರನ್‌ಗಳ ರೋಚಕ ಜಯ ಸಾಧಿಸಿ, ಫೈನಲ್ ತಲುಪಿದೆ.

<>><><*><><<>

ಪ್ರಧಾನಮಂತ್ರಿ ಭಾರತೀಯ ಜನೌಷಧಿ ಪರಿಯೋಜನೆಯು, ಜನೌಷಧಿ ಕೇಂದ್ರಗಳ ಮೂಲಕ ಸ್ವಯಂ ಉದ್ಯೋಗಕ್ಕೆ ಅವಕಾಶಗಳನ್ನು ಸೃಷ್ಟಿಸುತ್ತಿದ್ದು, ೨೦೪೭ ರ ವೇಳೆಗೆ ವಿಕಸಿತ ಭಾರತವನ್ನು ನಿರ್ಮಿಸುವ ದೃಷ್ಟಿಕೋನಕ್ಕೆ ಕೊಡುಗೆ ನೀಡುತ್ತಿದೆ ಎಂದು ಕೇಂದ್ರ ರಾಸಾಯನಿಕ ಮತ್ತು ರಸಗೊಬ್ಬರ ಸಚಿವ ಜೆ.ಪಿ.ನಡ್ಡಾ ನವದೆಹಲಿಯಲ್ಲಿ ಹೇಳಿದ್ದಾರೆ.

<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>

<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ ><><<>